# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1261
ಸದಸ್ಯರ ಹೆಸರು : ಶ್ರೀ ಬಿ. ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ : 19.12.2024
ಉತ್ತರಿಸುವ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಲಬುರಗಿ ಜಿಲ್ಲೆಯ ಕಮಲಾಪೂರ ತಾಲ್ಲೂಕಿನ ಗಂಡೋರಿನಾಲಾ ಆಣೆಕಟ್ಟೆಯ ಮುಖ್ಯ ಕಾಲುವೆ ಹಾಗೂ ವಿತರಣಾ ನಾಲೆಗಳ ದುರಸ್ತಿಗೆ ಬಿಡುಗಡೆಯಾದ ಅನುದಾನದಲ್ಲಿ ಕಳಪೆ ಕಾಮಗಾರಿ ನಿರ್ವಹಿಸಲಾಗಿದೆ ಎಂಬ ದೂರು ಲೋಕಾಯುಕ್ತಕ್ಕೆ ಸಲ್ಲಿಕೆಯಾಗಿರುವುದು ಹಾಗೂ ಕಾಮಗಾರಿಗಳಲ್ಲಿ ಅಕ್ರಮಗಳು ನಡೆದಿರುವುದು ನಿಜವೇ; (ವಿವರನೀಡುವುದು) | ಶ್ರೀ ವಿಶ್ವನಾಥ ಸಿತಿಕಾಂತ ತಡಕಲ್, ಕಲಬುರಗಿ ಇವರು ಗಂಡೋರಿ ನಾಲಾ ಯೋಜನೆಯ ಆಧುನೀಕರಣ ಕಾಮಗಾರಿಯಲ್ಲಿನ ಹಣ ದುರ್ಬಳಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ಜಲಸಂಪನ್ಮೂಲ ಇಲಾಖೆ, ಕಲಬುರಗಿ ವಲಯದಲ್ಲಿ ಅಂದು ಕಾರ್ಯನಿರ್ವಹಿಸುತ್ತಿದ್ದ ಅಧಿಕಾರಿಗಳ ವಿರುದ್ಧ ಮಾನ್ಯ ಲೋಕಾಯುಕ್ತ ಸಂಸ್ಥೆಯಲ್ಲಿ ದೂರು ದಾಖಲಿಸಿದ್ದು, ದಿನಾಂಕ:04.12.2023ರ ಲೋಕಾಯುಕ್ತ ಕಛೇರಿಯ ಪತ್ರದಲ್ಲಿ ಅಧಿಕಾರಿಗಳಿಗೆ ನೋಟೀಸ್ ಜಾರಿ ಮಾಡಿರುತ್ತದೆ. ಈ ಪ್ರಕರಣದಲ್ಲಿ ಮಾನ್ಯ ಕರ್ನಾಟಕ ಲೋಕಾಯುಕ್ತ ಸಂಸ್ಥೆಯಿಂದ ಈವರೆವಿಗೂ ತನಿಖಾ ವರದಿಯು ಸ್ವೀಕೃತವಾಗಿರುವುದಿಲ್ಲ. |
| ಆ) | ಸದರಿ ಕಾಮಗಾರಿ ದುರಸ್ತಿಗೆ ಬಿಡುಗಡೆಯಾದ ಅನುದಾನ ಎಷ್ಟು; ಈ ಕಾಮಗಾರಿಗಳಲ್ಲಿ ಅಕ್ರಮಗಳು ನಡೆದಿರುವ ಹಿನ್ನಲೆಯಲ್ಲಿ ಸರ್ಕಾರಕ್ಕೆ ಆಗಿರುವ ನಷ್ಟ ಎಷ್ಟು ಅಕ್ರಮಕ್ಕೆ ಹೊಣೆಗಾರರು ಯಾರು; (ವಿವರ ನೀಡುವುದು) | ಕಲಬುರಗಿ ಜಿಲ್ಲೆಯ ಕಮಲಾಪೂರ ತಾಲ್ಲೂಕಿನ ಗಂಡೋರಿನಾಲಾ ಯೋಜನೆಯ ಬಲದಂಡೆ ಕಾಲುವೆ ಕಿ.ಮೀ.0.00 ರಿಂದ 7.00 ಕಿ.ಮೀ. ವರೆಗೆ ಮತ್ತು ಎಡದಂಡೆ ಕಾಲುವೆ ಕಿ.ಮೀ.0.00 ರಿಂದ 60.00 ಕಿ.ಮೀ. ವರೆಗೆ ಆಧುನೀಕರಣ ಕಾಮಗಾರಿಗೆ ರೂ.86.53 ಕೋಟಿ ವೆಚ್ಚ ಮಾಡಲಾಗಿದೆ.<br>ಈ ಕಾಮಗಾರಿಗಳಲ್ಲಿ ನಡೆದಿದೆ ಎನ್ನಲಾದ ಅಕ್ರಮದಿಂದಾಗಿ ಸರ್ಕಾರಕ್ಕೆ ಆಗಿರುವ ನಷ್ಟ ಹಾಗೂ ಹೊಣೆಗಾರರು ಯಾರು ಎಂಬುದರ ಬಗ್ಗೆ ಮಾನ್ಯ ಕರ್ನಾಟಕ ಲೋಕಾಯುಕ್ತ ಸಂಸ್ಥೆಯಿಂದ ಪ್ರಕರಣದ ಕುರಿತು ತನಿಖಾ ವರದಿ ನಿರೀಕ್ಷಿಸಲಾಗಿದೆ. |
| ಇ) | ಕಾಮಗಾರಿಯನ್ನು ಗುತ್ತಿಗೆ ನೀಡುವಾಗ ಟೆಂಡರ್ ಕರೆಯಲಾಗಿತ್ತೆ; ಟೆಂಡರ್‌ನಲ್ಲಿ ಭಾಗವಹಿಸಿದ ಸಂಸ್ಥೆಗಳು ಯಾವುವು ಹಾಗೂ ನಮೂದಿಸಿದ ಟೆಂಡರ್ ಮೊತ್ತ ಎಷ್ಟು ಅಂತಿಮವಾಗಿ ಯಾವ ಸಂಸ್ಥೆಗೆ ಟೆಂಡರ್ ನೀಡಲಾಯಿತು; ಇವರು ನಮೂದಿಸಿದ ಮೊತ್ತ ಎಷ್ಟು? (ಮಾಹಿತಿ ನೀಡುವುದು) | ಕಲಬುರಗಿ ಜಿಲ್ಲೆಯ ಕಮಲಾಪೂರ ತಾಲ್ಲೂಕಿನ (1) ಗಂಡೋರಿನಾಲಾ ಯೋಜನೆಯ ಬಲದಂಡೆ ಕಾಲುವೆ ಕಿ.ಮೀ.0.00 ರಿಂದ 7.00 ಕಿ.ಮೀ. ವರೆಗೆ ಮತ್ತು ಎಡದಂಡೆ ಕಾಲುವೆ ಕಿ.ಮೀ.0.00 ರಿಂದ 60.00 ಕಿ.ಮೀ. ವರೆಗೆ ಆಧುನೀಕರಣ ಕಾಮಗಾರಿ ಹಾಗೂ (2) ಮುಲ್ಲಾಮಾರಿ ಮೇಲ್ದಂಡೆ ಯೋಜನೆಯ ಎಡದಂಡೆ ಕಾಲುವೆ ಕಿ.ಮೀ.0.00 ರಿಂದ 28.00 ವರೆಗೆ ಮತ್ತು ಬಲದಂಡೆ ಕಾಲುವೆ ಕಿ.ಮೀ. 0.00 ರಿಂದ 42.00 ಕಿ.ಮೀ. ವರೆಗೆ ಆಧುನೀಕರಣ ಕಾಮಗಾರಿಗಳನ್ನು ಒಟ್ಟುಗೂಡಿಸಿ ಟೆಂಡರ್ ಆಹ್ವಾನಿಸಿದ್ದು, ಟೆಂಡರ್‌ಗಿಟ್ಟ ಮೊತ್ತ ರೂ.169.99 ಕೋಟಿಗಳಾಗಿತ್ತು.<br>ಸದರಿ ಟೆಂಡರ್‌ನಲ್ಲಿ ಭಾಗವಹಿಸಿದ ಏಕೈಕ ಗುತ್ತಿಗೆದಾರರಾದ ಮೆ\|\| ಎನ್.ಡಿ. ವಡ್ಡರ್ ಇವರಿಗೆ ರೂ.176.39 ಕೋಟಿಗಳ ಮೊತ್ತಕ್ಕೆ ದಿನಾಂಕ:26.03.2018ರಂದು ಗುತ್ತಿಗೆಯನ್ನು ವಹಿಸಲಾಗಿರುತ್ತದೆ. |

ಸಂಖ್ಯೆ: ಜಸಂಇ 448 ಎಸ್‌ಎಸ್ 2024

(ಡಿ.ಕೆ.ಶಿವಕುಮಾರ್)
ಉಪ ಮುಖ್ಯಮಂತ್ರಿ